**ಸಾಕ್ಷಿಗೆ ದಿನಾಂಕ 21.01.2026 ರಂದು -ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು: 2 ನೇ ಎದುರುದಾರರ ಪರ ಶ್ರೀ. ಎ.ಪಿ. ವಕೀಲರಿಂದ:**

1. ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ತಯಾರಿಸಲು ಮಾಹಿತಿಯನ್ನು ನಮ್ಮ ವಕೀಲರು ನೀಡಿರುತ್ತಾರೆ. ದಿಃ12.09.2022 ರಂದು ಬೆಳಿಗ್ಗೆ 8.15 ರ ಸಮಯದಲ್ಲಿ ನನ್ನ ಪತಿಗೆ ಅಪಘಾತ ಆಗಿರುತ್ತದೆ. ದೂರಿನಲ್ಲಿ 2 ನೇ ಎದುರುದಾರರ ವಾಹನದ ನೋಂದಣಿ ಸಂಖ್ಯೆ ನಮೂದಿಸಿರುವುದಿಲ್ಲ ಎಂದರೆ ಸರಿಯಲ್ಲ. 2 ನೇ ಎದುರುದಾರರ ವಾಹನ ಅಪಘಾತ ಮಾಡದೇ ಇದ್ದರೂ ಸಹ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳಾಗಿ ನಮೂದಿಸಿರುತ್ತೇವೆ ಎಂದರೆ ಸರಿಯಲ್ಲ. ನನ್ನ ಪತಿ ಅಪಘಾತದ ಹಿನ್ನೆಲೆಯಿಂದ ಮರಣ ಹೊಂದಿಲ್ಲ ಎಂದರೆ ಸರಿಯಲ್ಲ. ನನ್ನ ಪತಿ ಪರಿಹಾರ ಕೋರಿ ಸಲ್ಲಿಸಿರುವ ಅರ್ಜಿಗೂ ಮತ್ತು ನನ್ನ ಮರಣ ನಂತರ ಸಲ್ಲಿಸಲಾದ ತಿದ್ದುಪಡಿ ಅರ್ಜಿ ಹಾಗೂ ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರಕ್ಕೂ ಹೊಂದಾಣಿಕೆ ಆಗುತ್ತಿಲ್ಲ ಎಂದರೆ ಸರಿಯಲ್ಲ. ಅಪಘಾತವನ್ನು ನೋಡದೇ ಇರುವುದರಿಂದ ಯಾರದೋ ಹೇಳಿಕೆಯ ಮೇರೆಗೆ 2 ನೇ ಎದುರುದಾರರ ವಾಹನದ ವಿರುದ್ದ ಸುಳ್ಳು ದೂರು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ: ಇಲ್ಲ.**

**(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ.)**

**(ಓ. ಹೇ. ಕೇ. ಸ.ಇ)**

**3ನೇ ಹೆಚ್ಚುವರಿ ಲಘು ವ್ಯವಹಾರಗಳ**
**ನ್ಯಾಯಾಧೀಶರು, ಬೆಂಗಳೂರು.**